# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 1455(1575)<br>**(ಸಮಾಜ ಕಲ್ಯಾಣ ಇಲಾಖೆಯಿಂದ ವರ್ಗಾವಣೆಗೊಂಡ ಪ್ರಶ್ನೆ)** |
| ಸದಸ್ಯರ ಹೆಸರು | ಡಾ: ಉಮಾಶ್ರೀ (ನಾಮ ನಿರ್ದೇಶನ ಹೊಂದಿದವರು) |
| ಉತ್ತರಿಸುವ ದಿನಾಂಕ | 19-12-2025 |
| ಉತ್ತರಿಸುವ ಸಚಿವರು | ಉನ್ನತ ಶಿಕ್ಷಣ ಸಚಿವರು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ವಿದ್ಯಾರ್ಥಿಗಳ ಉನ್ನತ ತಾಂತ್ರಿಕ ಹಾಗೂ ಡಿಜಿಟಲ್ ಶಿಕ್ಷಣಕ್ಕೆ ನೆರವಾಗುವ ಉಚಿತ ಲ್ಯಾಪ್‌ಟಾಪ್ ವಿತರಣೆ ಯೋಜನೆ ಜಾಲ್ತಿಯಲ್ಲಿದೆಯೇ ಅಥವಾ ಸ್ಥಗಿತವಾಗಿದೆಯೇ; | ಉನ್ನತ ಶಿಕ್ಷಣ ಇಲಾಖೆ ವ್ಯಾಪ್ತಿಯಲ್ಲಿ ಕಾಲೇಜು ಶಿಕ್ಷಣ ಇಲಾಖೆ ಮತ್ತು ತಾಂತ್ರಿಕ ಶಿಕ್ಷಣ ಇಲಾಖೆಗಳು ಕಾರ್ಯನಿರ್ವಹಿಸುತ್ತಿವೆ.<br><br>ಸರ್ಕಾರದಿಂದ ಘೋಷಿಸಲಾದ/ಘೋಷಿಸಲಾಗುವ ಯೋಜನೆಗಳನುಸಾರ ಆಯಾ ಆರ್ಥಿಕ ಸಾಲುಗಳಲ್ಲಿ ಲ್ಯಾಪ್‌ಟಾಪ್ ವಿತರಣೆಗೆ ಕ್ರಮಕೈಗೊಳ್ಳಲಾಗುತ್ತದೆ. |
| ಆ) | ಈ ಯೋಜನೆ ಚಾಲ್ತಿಯಲ್ಲಿದ್ದರೆ ಕಳೆದ 2 ವರ್ಷಗಳಿಂದ ಇಲ್ಲಿಯವರೆಗೂ ಎಷ್ಟು ಲ್ಯಾಪ್‌ಟಾಪ್ ವಿತರಣೆ ಮಾಡಲಾಗಿದೆ; ಒಂದು ವೇಳೆ ಸ್ಥಗಿತಗೊಂಡಿದ್ದರೆ ಅದಕ್ಕೆ ಕಾರಣಗಳೇನು; | ತಾಂತ್ರಿಕ ಶಿಕ್ಷಣ ಇಲಾಖೆಯಡಿ ವಿಶೇಷ ಅಭಿವೃದ್ಧಿ ಯೋಜನೆಯ ಮಹತ್ವಾಕಾಂಕ್ಷಿ ತಾಲ್ಲೂಕುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ 38 ಸರ್ಕಾರಿ ಪಾಲಿಟೆಕ್ನಿಕ್‌ಗಳಲ್ಲಿ 2023-24ನೇ ಸಾಲಿನಲ್ಲಿ ಪ್ರಥಮ ವರ್ಷಕ್ಕೆ ಪ್ರವೇಶ ಪಡೆದು ವ್ಯಾಸಾಂಗ ಮಾಡುತ್ತಿರುವ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ವಿದ್ಯಾರ್ಥಿಗಳಿಗೆ 2024-25ನೇ ಆರ್ಥಿಕ ಸಾಲಿನಲ್ಲಿ 1243 ಲ್ಯಾಪ್ ಟಾಪ್ ಗಳನ್ನು ವಿತರಿಸಲಾಗಿದೆ. |
| ಇ) | ಈ ಯೋಜನೆ ಪ್ರಾರಂಭಗೊಂಡ ವರ್ಷದಿಂದ ಇಲ್ಲಿಯವರೆಗೂ ಲ್ಯಾಪ್‌ಟಾಪ್ ಗಾಗಿ ಎಷ್ಟು ವಿದ್ಯಾರ್ಥಿಗಳು ಅರ್ಜಿ ಸಲ್ಲಿಸಿದ್ದಾರೆ; ಇದರಲ್ಲಿ ಎಷ್ಟು ವಿತರಣೆ ಮಾಡಲಾಗಿದೆ; ಇನ್ನು ಎಷ್ಟು ಬಾಕಿ ಇದೆ? | ಉಚಿತ ಲ್ಯಾಪ್‌ಟಾಪ್ ಯೋಜನೆಗೆ ಸಂಬಂಧಿಸಿದಂತೆ ಪ್ರತ್ಯೇಕವಾಗಿ ವಿದ್ಯಾರ್ಥಿಗಳಿಂದ ಅರ್ಜಿಗಳನ್ನು ಯಾವುದೇ ವರ್ಷದಲ್ಲಿಯೂ ಆಹ್ವಾನಿಸಿರುವುದಿಲ್ಲ. ಸರ್ಕಾರದಿಂದ ಘೋಷಿಸಲಾದ ಯೋಜನೆಗಳನುಸಾರ ಕಾಲೇಜುಗಳಿಂದ ಅರ್ಹ ವಿದ್ಯಾರ್ಥಿಗಳ ಮಾಹಿತಿಗಳನ್ನು ಪಡೆದು, ಲ್ಯಾಪ್‌ಟಾಪ್ ವಿತರಣೆಗೆ ಕ್ರಮಕೈಗೊಳ್ಳಲಾಗುತ್ತದೆ.<br><br>ಕಾಲೇಜು ಶಿಕ್ಷಣ ಇಲಾಖೆಯಡಿ 2016-17 ಸಾಲಿನಲ್ಲಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಪ್ರಥಮ ಪದವಿ ತರಗತಿಗಳಿಗೆ ಪ್ರವೇಶ ಪಡೆದ ಮತ್ತು ಕೌಟಂಬಿಕ ವಾರ್ಷಿಕ ಆದಾಯ ರೂ. 2.50 ಲಕ್ಷಗಳಿಗಿಂತ ಕಡಿಮೆ ಇದ್ದ ಒಟ್ಟು 24363 ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡ ವಿದ್ಯಾರ್ಥಿಗಳಿಗೆ ಉಚಿತ ಲ್ಯಾಪ್‌ಟಾಪ್‌ಗಳನ್ನು ವಿತರಿಸಲಾಗಿದೆ.<br><br>2019-20ನೇ ಸಾಲಿನಲ್ಲಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಪ್ರಥಮ ಪದವಿ ತರಗತಿಗಳಿಗೆ ಪ್ರವೇಶ ಪಡೆದ ಮತ್ತು ಕೌಟಂಬಿಕ ವಾರ್ಷಿಕ ಆದಾಯ ರೂ. 2.50 ಲಕ್ಷಗಳಿಗಿಂತ ಕಡಿಮೆ ಇದ್ದ ಒಟ್ಟು 109916 ಎಲ್ಲಾ ವರ್ಗಗಳ ವಿದ್ಯಾರ್ಥಿಗಳಿಗೆ ಉಚಿತ ಲ್ಯಾಪ್‌ಟಾಪ್‌ಗಳನ್ನು ಒದಗಿಸಲಾಗಿದ್ದು, ಪ್ರಸ್ತುತ ಯಾವುದೇ ಬಾಕಿ ಇರುವುದಿಲ್ಲ.<br><br>ತಾಂತ್ರಿಕ ಶಿಕ್ಷಣ ಇಲಾಖೆಯಡಿ 2017-18 ನೇ ಸಾಲಿನಲ್ಲಿ ಸರ್ಕಾರಿ ಪಾಲಿಟೆಕ್ನಿಕ್ ಮತ್ತು ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳಲ್ಲಿ ಪ್ರಥಮ ವರ್ಷಕ್ಕೆ ಪ್ರವೇಶ ಪಡೆದ ಒಟ್ಟು 7338 ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ವಿದ್ಯಾರ್ಥಿಗಳಿಗೆ ಉಚಿತ ಲ್ಯಾಪ್‌ಟಾಪ್ ಗಳನ್ನು ಒದಗಿಸಲಾಗಿದೆ. |

ಕಡತ ಸಂಖ್ಯೆ: ಇಡಿ 148 ಹೆಚ್‌ಪಿಸಿ 2025

(ಡಾ|| ಎಂ.ಸಿ.ಸುಧಾಕರ್)
ಉನ್ನತ ಶಿಕ್ಷಣ ಸಚಿವರು